ಪ್ರ-72-(44)

# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಶಾಂತರಾಮ್ ಬುಡ್ನಸಿಧ್ಧಿ ರವರ ನಿಯಮ-72 ಕ್ಕೆ ಉತ್ತರ ಸಲ್ಲಿಸುವ ಬಗ್ಗೆ.

ಪ್ರಶ್ನೆ:

ರಾಜ್ಯದ ಮೈಸೂರು. ಚಾಮರಾಜನಗರ. ಕೊಡಗು, ದಕ್ಷಿಣಕನ್ನಡ. ಉಡುಪಿ. ಚಿಕ್ಕಮಗಳೂರು ಮುಂತಾದ ಜಿಲ್ಲೆಗಳಲ್ಲಿ ಬುಡಕಟ್ಟು ಸಮುದಾಯದ ಕೆಲವು ಕುಟುಂಭಗಳು ಈಗಲೂ ಸಹ ಪ್ಲಾಸ್ಟಿಕ್ ಗುಡಿಸಲುಗಳಲ್ಲಿ ವಾಸಿಸುತ್ತಿದ್ದಾರೆ ಎಂಬುದನ್ನು ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

ಉತ್ತರ:

1) ಕೊಡಗು ಜಿಲ್ಲೆಯ ಪೊನ್ನಂಪೇಟೆ ತಾಲ್ಲೂಕು. ಪೊನ್ನಂಪೇಟೆ ಹೋಬಳಿ. ಹಾತೂರು ಗ್ರಾಮ ಪಂಚಾಯಿತಿ ಕುಂದಾ ಗ್ರಾಮದ ಬಸವೇಶ್ವರ ಕಾಲೋನಿಯ ಬುಡಕಟ್ಟು ಕುಟುಂಬಗಳಿಗೆ ಹಾಗೂ 107 ಯರವ ಕುಟುಂಬಗಳಿಗೆ ಮತ್ತು 09 ಜೇನುಕುರುಬ ಕುಟುಂಬಗಳಿಗೆ ಘಟಕ ವೆಚ್ಚ ರೂ.3.50 ಲಕ್ಷಗಳ ವೆಚ್ಚದಲ್ಲಿ ಮನೆ ನಿರ್ಮಾಣ ಮಾಡಲು ಹಾತೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 116 ಮನೆಗಳನ್ನು ರಾಜೀವ್ ಗಾಂಧಿ ವಸತಿ ಅಭಿವೃದ್ಧಿ ನಿಗಮದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ.

2) ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲ್ಲೂಕು ವ್ಯಾಪ್ತಿಯಲ್ಲಿ ವಾಸವಿರುವ 37 ಡೋಂಗ್ರಿಗೆರೆಸಿಯಾ ಜನಾಂದ ಕುಟುಂಬಗಳಿಗೆ ರೂ.3.50 ಲಕ್ಷಗಳ ಘಟಕ ವೆಚ್ಚದಲ್ಲಿ ಹೊಸ ಮನೆ ನಿರ್ಮಿಸಲು. ರೂ.25.00 ಲಕ್ಷಗಳ ವೆಚ್ಚದಲ್ಲಿ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಮತ್ತು ರೂ.25.00 ಲಕ್ಷಗಳ ವೆಚ್ಚದಲ್ಲಿ ವಿದ್ಯುತ್‌ಶ್ಚಕ್ತಿ ಸರಬರಾಜು ಮಾಡಲು ಮಂಜೂರಾದ ಒಟ್ಟಾರೆ ರೂ.179.50 ಲಕ್ಷಗಳಿಗೆ ಅನುಮೋದನೆ ನೀಡಲಾಗಿದೆ.

3) ಮೂಲನಿವಾಸಿಗಳ ಮನೆ ನಿರ್ಮಾಣ: ಮೈಸೂರು. ಚಾಮರಾಜನಗರ. ಕೊಡಗು, ದಕ್ಷಿಣಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಜೇನುಕುರುಬ ಮತ್ತು ಕೊರಗ ಜನಾಂಗದ 2732 ಫಲಾನುಭವಿಗಳಿಗೆ ಘಟಕ ವೆಚ್ಚ ರೂ.3.50 ಲಕ್ಷಗಳಂತೆ ರೂ.95.62 ಕೋಟಿಗಳನ್ನು ವೆಚ್ಚ ಮಾಡಲಾಗುವುದು. ರೂ.47.81 ಕೋಟಿಗಳನ್ನು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ವತಿಯಿಂದ ಹಾಗೂ ರೂ.47.81 ಕೋಟಿಗಳನ್ನು ರಾಜೀವ್ ಗಾಂಧಿ ಗ್ರಾಮೀಣ ವಸತಿ ಅಭಿವೃದ್ಧಿ ನಿಗಮದಿಂದ ಭರಿಸಿ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದೆ.

4) 2021-22ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದವರಿಗೆ ವಿವಿಧ ಅಭಿವೃದ್ಧಿ ಯೋಜನೆಯಡಿ ಅರಣ್ಯ ಆಧಾರಿತ ಬುಡಕಟ್ಟು ಜನಾಂಗಗಳು ಹಾಗೂ ಅಲೆಮಾರಿ/ಅರೆ ಅಲೆಮಾರಿ ಸೂಕ್ಷ್ಮ/ಅತಿ ಸೂಕ್ಷ್ಮ ಸಮುದಾಯಗಳು, ದೌರ್ಜನ್ಯ ಸಂತ್ರಸ್ತರು, ಮಾಜಿ ದೇವದಾಸಿಯರು. ವಿಧವೆಯರು/ಒಂಟಿ ಮಹಿಳೆಯರು. ಮೀನುಗಾರರಿಗೆ ವಸತಿ ಸೌಲಭ್ಯ ಮಂಜೂರು ಮಾಡಲು ರೂ.50.00 ಕೋಟಿಗಳನ್ನು ನಿಗಧಿಪಡಿಸಿಕೊಳ್ಳಲಾಗಿದ್ದು. ರಾಜೀವ್ ಗಾಂಧಿ ಗ್ರಾಮೀಣ ವಸತಿ ಅಭಿವೃದ್ಧಿ ನಿಗಮದ ಮೂಲಕ ವಸತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

5) ಬೇಡಿಕೆಗೆ ಅನುಗುಣವಾಗಿ ಹಾಗೂ ಅನುದಾನ ಲಭ್ಯತೆ ಆಧಾರದಲ್ಲಿ ವಸತಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.

ಸಕಇ 444 ಎಸ್‌ಟಿಪಿ 2021

(ಬಿ. ಶ್ರೀರಾಮುಲು)
ಸಾರಿಗೆ ಹಾಗೂ ಪರಿಶಿಷ್ಟ
ಪಂಗಡಗಳ ಕಲ್ಯಾಣ ಸಚಿವರು.